ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)
(ಮುಂದುವರೆದ ಉಪವೇಶನಗಳು)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 23ನೇ ನವೆಂಬರ್, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತಾರನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತಾರನೇ ಪಟ್ಟಿ

2. ಶಾಸನ ರಚನೆ

I.ವಿಧೇಯಕವನ್ನು ಮಂಡಿಸುವುದು

ಕರ್ನಾಟಕ ಅರಣ್ಯ (ತಿದ್ದುಪಡಿ)ವಿಧೇಯಕ, 2015
ಶ್ರೀ ಬಿ. ರಮಾನಾಥ ರೈ (ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು) ಅವರು:-

ಅ) 2015ನೇ ಸಾಲಿನ ಕರ್ನಾಟಕ ಅರಣ್ಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ)ಹಾಗೂ ವಿಧೇಯಕವನ್ನು ಮಂಡಿಸುವುದು

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ತಿದ್ದುಪಡಿ)ವಿಧೇಯಕ, 2015
ಶ್ರೀ ವಿನಯಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು:-

ಅ) 2015ನೇ ಸಾಲಿನ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ)ಹಾಗೂ ವಿಧೇಯಕವನ್ನು ಮಂಡಿಸುವುದು

II.ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ)ವಿಧೇಯಕ, 2015
ಶ್ರೀ ವಿನಯಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು:-

ಅ)2015ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ)ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.

3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಗೋವಿಂದ ಎಂ. ಕಾರಜೋಳ, ಹೆಚ್.ಡಿ. ಕುಮಾರಸ್ವಾಮಿ, ವೈ.ಎಸ್.ವಿ. ದತ್ತಾ, ಬಿ.ಆರ್. ಪಾಟೀಲ್, ಜಿ. ರಾಮಕೃಷ್ಣ ಮತ್ತು ಮಾಲಿಕಯ್ಯ ವಿ. ಗುತ್ತೇದಾರ್ ಹಾಗೂ ಇತರರು – ರಾಜ್ಯದಲ್ಲಿನ ಬರಗಾಲ, ರೈತರ ಸಂಕಷ್ಟಗಳ ಬಗ್ಗೆ ಮುಂದುವರೆದ ಚರ್ಚೆ.

2. ಶ್ರೀಯುತರುಗಳಾದ ಬಿ.ಎನ್. ವಿಜಯಕುಮಾರ್, ಎಸ್. ಸುರೇಶ್‌ಕುಮಾರ್, ಎಸ್. ರಘು ಹಾಗೂ ಎಲ್.ಎ. ರವಿಸುಬ್ರಮಣ್ಯ ಅವರುಗಳು – ಬೆಂಗಳೂರು ನಗರದಲ್ಲಿ ಕಸದ ಸಮಸ್ಯೆ ಹೆಚ್ಚಾಗಿದ್ದು, ಕಸ ವಿಲೇವಾರಿಯಾಗದೆ ರಸ್ತೆ, ಪಾರ್ಕ್ ಮತ್ತು ಖಾಲಿ ನಿವೇಶನಗಳಲ್ಲಿ ಕಸವನ್ನು ಅವೈಜ್ಞಾನಿಕವಾಗಿ ವಿಂಗಡಣೆ ಮಾಡಲಾಗುತ್ತಿರುವುದರಿಂದ ಸಾರ್ವಜನಿಕರಿಗೆ ಅನಗತ್ಯ ಕಿರಿಕಿರಿ ಉಂಟಾಗಿ ಆರೋಗ್ಯಕ್ಕೆ ಹಾನಿಯುಂಟಾಗುತ್ತಿದ್ದು, ಕಸದ ಸಮಸ್ಯೆಯನ್ನು ವೈಜ್ಞಾನಿಕವಾಗಿ ನಿಭಾಯಿಸುವ ಬಗ್ಗೆ ಚರ್ಚಿಸುವುದು.

3. ಶ್ರೀಯುತರುಗಳಾದ ಕೆ.ಎಂ. ಶಿವಲಿಂಗೇಗೌಡ, ಹೆಚ್.ಡಿ. ರೇವಣ್ಣ, ವೈ.ಎಸ್.ವಿ. ದತ್ತಾ ಹಾಗೂ ಇತರರು – ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕು ವ್ಯಾಪ್ತಿಯಲ್ಲಿ "ಬಹುಗ್ರಾಮ" ಕುಡಿಯುವ ನೀರಿನ ಯೋಜನೆ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಚರ್ಚಿಸುವುದು.

4. ಶ್ರೀಯುತರುಗಳಾದ ಎನ್.ಹೆಚ್. ಕೋನರಡ್ಡಿ, ಎ.ಎಸ್. ಪಾಟೀಲ(ನಡಹಳ್ಳಿ), ವೈ.ಎಸ್.ವಿ. ದತ್ತಾ, ಕೆ.ಎಂ. ಶಿವಲಿಂಗೇಗೌಡ, ಕೆ.ಆರ್. ರಮೇಶ್‌ಕುಮಾರ್ ಹಾಗೂ ಇತರರು – ಮಹದಾಯಿ ಉಪಯೋಜನೆಯಿಂದ ಕಳಸಾ-ಬಂಡೂರಿ ಯೋಜನೆಯನ್ನು ಕೂಡಲೇ ಜಾರಿಗೊಳಿಸುವ ಬಗ್ಗೆ ಚರ್ಚಿಸುವುದು.

5. ಶ್ರೀಯುತರುಗಳಾದ ಕೆ.ಎಸ್. ಪುಟ್ಟಣ್ಣಯ್ಯ, ಹಾಲಾಡಿ ಶ್ರೀನಿವಾಸ ಶೆಟ್ಟಿ ಹಾಗೂ ಎಸ್. ತಿಪ್ಪೇಸ್ವಾಮಿ ಅವರುಗಳು – ರಾಷ್ಟ್ರೀಕೃತ ಹಾಗೂ ಷೆಡ್ಯೂಲ್ ಬ್ಯಾಂಕ್‌ಗಳು ಟ್ರ್ಯಾಕ್ಟರ್ ತಯಾರಿಕಾ ಕಂಪನಿಗಳಿಗೆ ಅನುಕೂಲ ಮಾಡಿಕೊಡುವ ದೃಷ್ಟಿಯಿಂದ ರೈತರಿಗೆ ಒತ್ತಾಯ ಪೂರ್ವಕವಾಗಿ ಹಾಗೂ ಅನಾವಶ್ಯಕವಾಗಿ ಟ್ರ್ಯಾಕ್ಟರಿನ ಮೂಲ ಬೆಲೆಗಿಂತ ದುಪ್ಪಟ್ಟು ಬೆಲೆಗೆ ಸಾಲ ಕೊಡಿಸಿಕೊಡುವುದರ ಮೂಲಕ ಮಾರಾಟ ಮಾಡಿ ವಂಚನೆ ಮಾಡುತ್ತಿರುವ ಬಗ್ಗೆ ಚರ್ಚಿಸುವುದು.

6. ಶ್ರೀಯುತರುಗಳಾದ ಎಂ.ಟಿ. ಕೃಷ್ಣಪ್ಪ, ಕೆ. ಷಡಕ್ಷರಿ, ಎಂ.ಜೆ. ಅಪ್ಪಾಜಿ, ಬಿ.ಬಿ. ನಿಂಗಯ್ಯ ಹಾಗೂ ಇತರರು – ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ಹುಳಿಯಾರು ಹೋಬಳಿ ಅಂಬಾಪುರ ಗ್ರಾಮದ ಸರ್ವೆ ನಂ:46ರ ಅರಣ್ಯ ಪ್ರದೇಶವನ್ನು ಅಕ್ರಮವಾಗಿ ಮಂಜೂರು ಮಾಡಿಕೊಂಡಿರುವ ಬಗ್ಗೆ ಚರ್ಚೆ ನಡೆಸುವುದು.

4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು – ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಬೆಂಗಳೂರು-ಜಾಲ್ಸೂರು ರಾಜ್ಯ ಹೆದ್ದಾರಿ 85ರಲ್ಲಿ ಎಸ್‌ಹೆಚ್‌ಡಿಪಿ 2ನೇ ಹಂತದಲ್ಲಿ ಕಾಂಕ್ರೀಟ್ ರಸ್ತೆ ಅಭಿವೃದ್ಧಿಗೆ ಅನುದಾನ ಬಿಡುಗಡೆಯಾಗಿದ್ದರೂ ಸಹ ಅರಣ್ಯ ಇಲಾಖೆಯವರು ಅಡ್ಡಿಪಡಿಸುತ್ತಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

2. ಶ್ರೀ ಗುರು ಪಾಟೀಲ ಶಿರವಾಳ ಅವರು – ಕೃಷ್ಣಾ ಮೇಲ್ದಂಡೆ ಯೋಜನೆಯ ನಾರಾಯಣ ಎಡದಂಡೆ ನಾಲೆಗೆ 14 ದಿನಗಳು ನೀರು ಹರಿಸಲು ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

3. ಶ್ರೀ ಎಂ. ರಾಜಣ್ಣ ಅವರು – ಚಿಕ್ಕಬಳ್ಳಾಪುರ ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳ ಕಾಮಗಾರಿಗಳಿಗೆ ತಲಾ 5.00 ಕೋಟಿಗಳ ಅನುದಾನ ಮಂಜೂರಾಗಿದ್ದು ಹಣ ಬಿಡುಗಡೆಯಾಗದೆ ಕಾಮಗಾರಿಗಳು ಪ್ರಾರಂಭವಾಗದಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4. ಶ್ರೀ ಎನ್. ಚಲುವರಾಯಸ್ವಾಮಿ ಅವರು – ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ಚೀಣ್ಯ ಹೋಬಳಿಯ ಸೋಮನಹಳ್ಳಿಯಲ್ಲಿ ಮೊರಾರ್ಜಿ ವಸತಿ ಶಾಲೆಯ ಕಟ್ಟಡ ಕಾಮಗಾರಿಯನ್ನು ಪೂರ್ಣಗೊಳಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

5. ಶ್ರೀ ವಿ. ಸುನಿಲ್‌ಕುಮಾರ್ ಅವರು – ರಾಜ್ಯದಲ್ಲಿ ನಿಗದಿತ ಮದ್ಯ ಮಾರಾಟದ ಗುರಿ ತಲುಪದ ಮದ್ಯದಂಗಡಿ ಮಾಲೀಕರಿಗೆ ದಂಡ ವಿಧಿಸಿ ಕಿರುಕುಳ ನೀಡುತ್ತಿರುವ ಬಗ್ಗೆ ಮಾನ್ಯ ಅಬಕಾರಿ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

6. ಶ್ರೀ ಬಿ.ಬಿ. ನಿಂಗಯ್ಯ ಅವರು – ಬೆಂಗಳೂರಿನ ಕತ್ತರಿಗುಪ್ಪೆಯ ಹಾಗೂ ಸುತ್ತಮುತ್ತಲಿನ ಬಡಾವಣೆಯ ನಿವಾಸಿಗಳು ಒಳಚರಂಡಿ ನೀರನ್ನು ಅನಧಿಕೃತವಾಗಿ ರಾಜಕಾಲುವೆಗೆ ಬಿಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವ ಹಾಗೂ ಅನಧಿಕೃತವಾಗಿ ರಾಜಕಾಲುವೆ ಜಾಗವನ್ನು ಅತಿಕ್ರಮಿಸಿಕೊಂಡಿರುವ ಬಗ್ಗೆ ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

7. ಶ್ರೀ ಜಿ.ಎಚ್. ಶ್ರೀನಿವಾಸ್ ಅವರು – ತರೀಕೆರೆ ವಿಧಾನಸಭಾ ಕ್ಷೇತ್ರದ ಕೆಂಚಿಕೊಪ್ಪ, ಮಾಳಿಕೊಪ್ಪ, ಮಂಡರಹಳ್ಳಿ, ಮತದಹಳ್ಳಿ ಹಾಗೂ ದೊಡ್ಡಕುಂದೂರು ಗ್ರಾಮಗಳ ಮನೆ ಮತ್ತು ನಿವೇಶನಗಳಿಗೆ ಇ-ಸ್ವತ್ತು ಯೋಜನೆಯಡಿ ನಮೂನೆ-9 ಮತ್ತು ನಮೂನೆ-11ಎ ನೀಡದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

8. ಶ್ರೀ ಕೆ.ಎಸ್. ಪುಟ್ಟಣ್ಣಯ್ಯ ಅವರು – ಪಾಂಡವಪುರ ತಾಲ್ಲೂಕಿನ ತೊಣ್ಣೂರು ಕೆರೆ ಮತ್ತು ಮೇಲುಕೋಟೆ ಬೆಟ್ಟದ ಪ್ರವಾಸೋದ್ಯಮವಾಗಿ ಸಮಗ್ರ ಅಭಿವೃದ್ಧಿಗೆ ಶಾಸಕರ ಅಧ್ಯಕ್ಷತೆಯಲ್ಲಿ ಮೇಲುಕೋಟೆ ಅಭಿವೃದ್ಧಿ ಪ್ರಾಧಿಕಾರವನ್ನು ಪುನರ್ ರಚಿಸುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು

9. ಶ್ರೀಮತಿ ಶಾರದಾ ಪೂರ್ಯ ನಾಯ್ಕ ಅವರು – ಶಿವಮೊಗ್ಗ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಸೋಗಾನೆ, ತುಪ್ಪೂರು, ಕೋಹಳ್ಳಿ, ಮುದ್ದಿನಕೊಪ್ಪ, ಬೇಡರ ಹೊಸಹಳ್ಳಿ, ಹನುಮಂತಾಪುರ ಮತ್ತು ಸನ್ಯಾಸಿಕೊಡಮಗ್ಗೆ ಗ್ರಾಮ ಪಂಚಾಯ್ತಿಗಳಿಗೆ ಸ್ವಂತ ಕಟ್ಟಡಗಳಿಲ್ಲದೆ ಹಾಗೂ ಸೂಕ್ತ ಮೂಲಭೂತ ಸೌಕರ್ಯಗಳಿಲ್ಲದೆ ವಿವಿಧ ಯೋಜನೆಗಳ ಕಾರ್ಯನಿರ್ವಹಣೆಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

10. ಡಾ: ಎ.ಬಿ. ಮಾಲಕ ರೆಡ್ಡಿ ಅವರು – ಜನ ದಟ್ಟಣೆ ಹೆಚ್ಚಾಗಿರುವ ಯಾದಗಿರಿ ಪಟ್ಟಣದಲ್ಲಿ ಸಂಚಾರಿ ಪೊಲೀಸ್ ಠಾಣೆ, ಗಂಜ್ ಪ್ರದೇಶಕ್ಕೆ ಪ್ರತ್ಯೇಕ ಪೊಲೀಸ್ ಠಾಣೆ ಹಾಗೂ ಜಿಲ್ಲಾ ಕೇಂದ್ರಕ್ಕೆ ಮಹಿಳಾ ಪೊಲೀಸ್ ಠಾಣೆಗಳನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

11. ಶ್ರೀ ಕೆ.ಎಸ್. ಮಂಜುನಾಥಗೌಡ ಅವರು – ಮಾಲೂರು ತಾಲ್ಲೂಕಿನ ದಿನ್ನಹಳ್ಳಿ, ಅರಮಾಕನಹಳ್ಳಿ, ತಾಳಕುಂಟೆ ಹಾಗೂ ರಾಂಪುರ ಗ್ರಾಮಗಳಲ್ಲಿನ ರೈತರ ಜಮೀನುಗಳಿಗೆ ಎಲ್ಲಾ ರೀತಿಯ ಸರ್ಕಾರಿ ದಾಖಲೆಗಳಿದ್ದರೂ ಸಹ, ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳುತ್ತಿರುವ ಅರಣ್ಯ ಇಲಾಖೆಯ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

12. ಶ್ರೀ ಸಾ.ರಾ. ಮಹೇಶ್ ಅವರು – ಮೈಸೂರು ಜಿಲ್ಲೆ ಕೆ.ಆರ್. ನಗರ ತಾಲ್ಲೂಕಿನ ಶ್ರೀರಾಮ ಸಹಕಾರ ಸಕ್ಕರೆ ಕಾರ್ಖಾನೆಯನ್ನು ಪುನರಾರಂಭಿಸುವ ಬಗ್ಗೆ ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

13. ಶ್ರೀ ಸಿ.ಬಿ. ಸುರೇಶ್ ಬಾಬು ಅವರು – ಚಿಕ್ಕನಾಯಕನಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಜಾನಕಲ್ಲು ಗ್ರಾಮದಲ್ಲಿ ಬಸವ ವಸತಿ ಯೋಜನೆಯಡಿಯಲ್ಲಿ ಅನರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿರುವ ಇಲಾಖಾ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

14. ಶ್ರೀ ಹೆಚ್.ಎಸ್. ಶಿವಶಂಕರ್ ಅವರು – ಹರಿಹರ ನಗರದ ಒಳಚರಂಡಿ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಹಾಗೂ ಹೊಸದಾಗಿ ಸೇರ್ಪಡೆಯಾದ ಗ್ರಾಮಗಳಿಗೆ ಮತ್ತು ಪುರಸಭೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

15. ಶ್ರೀ ನಾರಾಯಣಗೌಡ ಅವರು – ಕೆ.ಆರ್.ಪೇಟೆ ತಾಲ್ಲೂಕು ಬೂಕನಕೆರೆ ಹೋಬಳಿ ಬಣ್ಣೇನಹಳ್ಳಿ ಗ್ರಾಮದಲ್ಲಿ ಫೇವರೀಚ್ ಕಂಪನಿಯ ಮೆಗಾ ಫುಡ್ ಪಾರ್ಕ್ ನಿರ್ಮಾಣ ಮಾಡಲು ಮಂಜೂರಾತಿ ನೀಡಿದ್ದರೂ, ಕಾಮಗಾರಿ ಪ್ರಾರಂಭವಾಗದಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

16. ಶ್ರೀ ಬಿ. ಸುರೇಶ್‌ಗೌಡ ಅವರು – ತುಮಕೂರು ತಾಲ್ಲೂಕು ಡಿ. ಕೊರಟಗೆರೆ ಗ್ರಾಮದ ಸರ್ಕಾರಿ ಗೋಮಾಳ ಸರ್ವೆ ನಂ:84ಲ್ಲಿ ಆಶ್ರಯ ಯೋಜನೆಯಡಿಯಲ್ಲಿ ದಲಿತರಿಗೆ ಮೀಸಲಿಟ್ಟ 33 ಗುಂಟೆ ಜಮೀನನ್ನು ಒತ್ತುವರಿದಾರರಿಂದ ತೆರವುಗೊಳಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

17. ಶ್ರೀ ಎಸ್. ಭೀಮಾ ನಾಯ್ಕ ಅವರು – ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಗೆ ತುಂಗಭದ್ರಾ ನದಿಯಿಂದ ಕುಡಿಯುವ ನೀರಿನ ಯೋಜನೆಯ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಿ ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

18. ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು – ರಾಮನಗರ ತಾಲ್ಲೂಕು ಬಿಡದಿ ಹೋಬಳಿಯ ಬೆಂಗಳೂರು-ಮೈಸೂರು ರಸ್ತೆಯ ಈಗಲ್‌ಟನ್ ಶಾನಮಂಗಲ ರಸ್ತೆಯು ಕ್ರಿಟಿಕಲ್ ಇನ್‌ಫ್ರಾಸ್ಟ್ರಕ್ಚರ್ ಯೋಜನೆಯಡಿ ಮಂಜೂರಾಗಿ ಅನುದಾನ ಬಿಡುಗಡೆಯಾಗಿದ್ದರೂ ಕಾಮಗಾರಿಯನ್ನು ಪ್ರಾರಂಭಿಸದಿರುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು

ಎಸ್.ಮೈ. ಕುಳಗೇರಿ
ಕಾರ್ಯದರ್ಶಿ(ಪ್ರ)

NR.